**ಎಂ.ವಿ.ಸಿ. ನಂ. 1376/2022** **ಪಿ.ಡಬ್ಲ್ಯೂ- 1**

**ಸಾಕ್ಷಿಯನ್ನು ದಿನಾಂಕ 28.7.2023 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಮುಂದುವರೆದ ಪಾಟೀ ಸವಾಲುಃ 1 ರಿಂದ 3 ನೇ ಎದುರುದಾರ ಪರ ಶ್ರೀ ಎ.ಜಿ.ಪಿ ರವರಿಂದಃ

ಸದರಿ ದಿನ ಬೈಕಿನಲ್ಲಿ ನಾನು ಒಬ್ಬನೇ ಹೋಗುತ್ತಿದ್ದೆ. ಆಸ್ಪತ್ರೆಗೆ ನನ್ನ ಜೊತೆ ಆರ್.ಎಫ್.ಓ ರವರು ಸಹ ಬಂದಿದ್ದರು ಎಂದರೆ ನನಗೆ ಗೊತ್ತಿಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣಪತ್ರಕ್ಕೆ ಮಾಹಿತಿಯನ್ನು ಯಾರು ನೀಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ ಹಾಗೂ ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಮೈಸೂರಿನ ಅಪೋಲೋ ಆಸ್ಪತ್ರೆಯು ತುಂಬಾ ದುಬಾರಿ ಆಸ್ಪತ್ರೆ ಎಂದರೆ ನನಗೆ ಗೊತ್ತಿಲ್ಲ. ನಾನು ಡಿಸ್‌ಚಾರ್ಜ ಆದ ನಂತರ ಪುನಃ ರಾಮಕೃಷ್ಣ ಎಂಬ ವೈದ್ಯರನ್ನು ಭೇಟಿಯಾಗಿರುತ್ತೇನೆ. ಪ್ರತಿ ವಾರ ಸದರಿ ವೈದ್ಯರ ಬಳಿ ಚಿಕಿತ್ಸೆ ಪಡೆದಿರುತ್ತೇನೆ. ನಾನು ಪ್ರತಿವಾದಿ ಸದರಿ ವೈದ್ಯರನ್ನು ಭೇಟಿಯಾದಾಗ ಅವರು ಯಾವುದೇ ಹೊಸ ಔಷದಿ ಚೀಟಿಯನ್ನು ನೀಡಿರುವುದಿಲ್ಲ ಮತ್ತು ನಾನು ಯಾವುದೇ ಔಷದಿಯನ್ನು ಖರೀದಿಸಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ತಂದೆ ಮತ್ತು ನಮ್ಮ ಊರಿನವರು ನನ್ನ ವೈದ್ಯಕೀಯ ಚಿಕಿತ್ಸೆಗೆ ಹಣ ನೀಡಿರುವುದಿಲ್ಲ, ಎದುರುದಾರರೇ 6 ಲಕ್ಷ ಹಣವನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ.

ನಾನು ನನ್ನ ಆದಾಯಕ್ಕೆ ಸಂಬಂಧಪಟ್ಟಂತೆ ಯಾವುದೇ ದಾಖಲಾತಿಯನ್ನು ಹಾಜರುಪಡಿಸದೇ ಇರುವುದರಿಂದ ನನಗೆ ತಿಂಗಳಿಗೆ 18 ಸಾವಿರ ಆದಾಯ ಇರುವುದು ಸುಳ್ಳು ಎಂದರೆ ಸರಿಯಲ್ಲ. ನಾನು ಗಾರೆ ಕೆಲಸ ಮಾಡುತ್ತಿದ್ದ ಬಗ್ಗೆ ಜಾಬ್ ಕಾರ್ಡನ್ನು ಹಾಜರುಪಡಿಸಿರುವುದಿಲ್ಲ. ಈ ದಿನ ನ್ಯಾಯಾಲಯಕ್ಕೆ ನಾನು ಬಸ್ ನಲ್ಲಿ ಬಂದಿರುತ್ತೇನೆ. ನಾನು ಈ ದಿನ ನನ್ನ ಪ್ಯಾಷನ್ ಪ್ರೊ ಬೈಕಿನಲ್ಲಿ ನ್ಯಾಯಾಲಯಕ್ಕೆ ಬಂದಿರುತ್ತೇನೆ ಎಂದರೆ ಸರಿಯಲ್ಲ. ನಾನು ಈಗ ಆರೋಗ್ಯವಾಗಿದ್ದು, ಚನ್ನಾಗಿ ಓಡಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಚಿಕಿತ್ಸೆಗೆ ಸಂಬಂಧಪಟ್ಟಂತೆ ಎಲ್ಲಾ ಬಿಲ್ಲುಗಳು, ಎಕ್ಸರೇ ವರದಿಗಳು ಮತ್ತು ಕೇಸ್ ಶೀಟನ್ನು ನ್ಯಾಯಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಆಸ್ಪತ್ರೆಯ ಸಿಬ್ಬಂಧಿ ಜೊತೆ ಸೇರಿಕೊಂಡು ಸರ್ಕಾರದಿಂದ ಹೆಚ್ಚಿನ ಪರಿಹಾರ ಪಡೆಯಲು ಸುಳ್ಳು ವೈದ್ಯಕೀಯ ಬಿಲ್ಲುಗಳನ್ನು ಪಡೆದುಕೊಂಡು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ವೈದ್ಯಕೀಯ ಖರ್ಚು ಮತ್ತು ಇತರೆ ಖರ್ಚನ್ನು ಎದುರುದಾರರೇ ನೀಡಿರುವುದರಿಂದ ನಾನು ಈ ಅರ್ಜಿಯಲ್ಲಿ ಕೋರಿರುವ ಪರಿಹಾರ ಪಡೆಯಲು ಬರುವುದಿಲ್ಲ ಎಂದರೆ ಸರಿಯಲ್ಲ.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.